# ಕನ್ನಡ ಸಾಹಿತ್ಯ ಪರಿಷತ್ತು

ಪಂಪ ಮಹಾಕವಿ ರಸ್ತೆ, ಚಾಮರಾಜಪೇಟೆ, ಬೆಂಗಳೂರು – ೫೬೦ ೦೧೮
ದೂರವಾಣಿ : ೦೮೦ ೨೬೬೧೨೯೯೧, ೨೬೬೨೩೫೮೪ ಫ್ಯಾಕ್ಸ್ : ೨೬೫೨೩೮೬೭
http://www.kasapa.in e-mail : kannadaparishattu@gmail.com


ಕ್ರಮಸಂಖ್ಯೆ : ಕಸಾಪ / **ಪ್ರಕಟಣೆ**/ ೨೦೨೩-೨೪ ದಿನಾಂಕ : ೦೪-೧೧-೨೦೨೩

*ಇವರಿಗೆ*
**ಸಂಪಾದಕರು / ಮುಖ್ಯ ವರದಿಗಾರರು**
.................................................ಬೆಂಗಳೂರು

**ಮಾಧ್ಯಮ ಆಹ್ವಾನ**

# ಪ್ರಧಾನಿ ಹುದ್ದೆಗೇರಿದ್ದ ಮೊದಲ ಕನ್ನಡಿಗ

# ಎಚ್.ಡಿ.ದೇವೇಗೌಡರಿಗೆ ಶ್ರೀ ನಾಲ್ವಡಿ ಕೃಷ್ಣ ರಾಜ ಒಡೆಯರ್ ಪ್ರಶಸ್ತಿ ಪ್ರದಾನ

ಕನ್ನಡ ಸಾಹಿತ್ಯ ಪರಿಷತ್ತಿನ ಸ್ಥಾಪಕರು ಪ್ರಗತಿಯ ಹಾದಿಯಲ್ಲಿ ಮೈಸೂರು ಸಂಸ್ಥಾನವನ್ನು ನಡೆಸಿದವರೂ, ಹಿಂದುಳಿದ ಮತ್ತು ಶೋಷಿತ ವರ್ಗಗಳ ಅಭಿವೃದ್ಧಿಗೆ ಶ್ರಮಿಸಿದವರೂ ಆದ ಶ್ರೀ ನಾಲ್ವಡಿ ಕೃಷ್ಣ ರಾಜ ಒಡೆಯರ್ ಅವರ ಹೆಸರಿನಲ್ಲಿರುವ ಪ್ರತಿಷ್ಠಿತ ದತ್ತಿ ಪ್ರಶಸ್ತಿಯನ್ನು ಪ್ರತಿವರ್ಷವೂ ನಾಡಿನ ಸರ್ವತೋಮುಖ ಅಭಿವೃದ್ಧಿಗೆ ಶ್ರಮಿಸಿದ ಸಾಧಕರಿಗೆ ನೀಡಲಾಗುತ್ತಿದೆ. **2022ನೆಯ ಸಾಲಿನ ಶ್ರೀ ನಾಲ್ವಡಿ ಕೃಷ್ಣರಾಜ ಒಡೆಯರ್ ದತ್ತಿ ಪ್ರಶಸ್ತಿಯನ್ನು 6ನೆಯ ನವಂಬರ್ ಸೋಮವಾರ ಸಂಜೆ 5.30ಕ್ಕೆ ಕನ್ನಡ ಸಾಹಿತ್ಯ ಪರಿಷತ್ತಿನ 'ಶ್ರೀಕೃಷ್ಣರಾಜ ಪರಿಷತ್ತಿನ ಮಂದಿರ'ದಲ್ಲಿ** ಪ್ರಧಾನಿ ಹುದ್ದೆಗೇರಿದ ಮೊದಲ ಕನ್ನಡಿಗರ ಎನ್ನುವ ಹೆಗ್ಗಳಿಕೆಯ ಶ್ರೀ ಎಚ್.ಡಿ.ದೇವೇಗೌಡರಿಗೆ ನೀಡಲಾಗುತ್ತಿದೆ ಎಂದು **ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ನಾಡೋಜ ಡಾ.ಮಹೇಶ ಜೋಶಿಯವರು ಮಾಹಿತಿ ನೀಡಿದ್ದಾರೆ.**

ಸುಮಾರು ಎಪ್ಪತ್ತು ವರ್ಷಗಳಿಂದ ರಾಜಕೀಯದಲ್ಲಿರುವ ಮಣ್ಣಿನ ಮಗ ಎಂದೇ ಹೆಸರಾದ ಎಚ್.ಡಿ.ದೇವೇಗೌಡರು ವಿಧಾನ ಸಭೆಯ ವಿರೋಧ ಪಕ್ಷದ ನಾಯಕರಾಗಿ, ಲೋಕೋಪಯೋಗಿ ಮತ್ತು ನೀರಾವರಿ ಸಚಿವರಾಗಿ ಮುಖ್ಯಮಂತ್ರಿಗಳಾಗಿ ಪ್ರಧಾನಿ ಹುದ್ದೆಯಲ್ಲಿ ಸದಾ ಕನ್ನಡಿಗರ ಸರ್ವತೋಮುಖ ಏಳಿಗೆಗೆ ಶ್ರಮಿಸುತ್ತಾ ಬಂದವರು. ಇಂದಿಗೂ ಜನಪರ ಹೋರಾಟದಲ್ಲಿ ಸಕ್ರಿಯರಾಗಿರುವ ಅವರು ನೀರಾವರಿ ವಿಚಾರದಲ್ಲಿ ಅಪಾರ ಪರಿಣಿತಿಯನ್ನು ಹೊಂದಿದವರು. ಅಪಾರ ಅಕ್ಷರ ಪ್ರೀತಿಯನ್ನಿಟ್ಟು ಕೊಂಡು ಕನ್ನಡ ಸಾಹಿತ್ಯ ಪರಿಷತ್ತಿನ ಕುರಿತು ಸದಾ ಒಲವನ್ನಿಟ್ಟು ಕೊಂಡ ಎಚ್.ಡಿ.ದೇವೇಗೌಡರಿಗೆ ಅರ್ಹವಾಗಿ ಈ ಪ್ರಶಸ್ತಿಯನ್ನು ನೀಡಲಾಗುತ್ತಿದೆ ಎಂದು **ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ನಾಡೋಜ ಡಾ.ಮಹೇಶ ಜೋಶಿಯವರು ತಿಳಿಸಿದ್ದಾರೆ**.

ಶ್ರೇಷ್ಠ ಕನ್ನಡಿಗರಾದ ಎಚ್.ಡಿ.ದೇವೇಗೌಡರಿಗೆ ಇನ್ನೊಬ್ಬ ಶ್ರೇಷ್ಠ ಕನ್ನಡಿಗರಾದ ನ್ಯಾಯಮೂರ್ತಿ ಎಂ.ಎನ್.ವೆಂಕಟಾಚಲಯ್ಯನವರು ಪ್ರಶಸ್ತಿ ನೀಡುತ್ತಿರುವುದು ಕಾರ್ಯಕ್ರಮದ ವಿಶೇಷ. ಭಾರತದ ಸರ್ವೋಚ್ಚ ನ್ಯಾಯಾಲಯದ ಮುಖ್ಯ ನ್ಯಾಯಮೂರ್ತಿಗಳಾದ ಎರಡನೆಯ ಕನ್ನಡಿಗ ಎನ್ನುವ ಹೆಗ್ಗಳಿಕೆಯ ನ್ಯಾಯಮೂರ್ತಿ ಎಂ.ಎನ್.ವೆಂಕಟಾಚಲಯ್ಯನವರು ಭಾರತೀಯ ಮೌಲ್ಯಗಳಿಗೆ ಕಾನೂನಿನ ಸುಭದ್ರ ಚೌಕಟ್ಟನ್ನು ನೀಡಿದವರು. ವಕೀಲರಾಗಿ, ಕರ್ನಾಟಕದ ಉಚ್ಚ ನ್ಯಾಯಾಲಯದ

ನ್ಯಾಯಮೂರ್ತಿಯಾಗಿ, ಸರ್ವೋಚ್ಚ ನ್ಯಾಯಾಲಯದ ನ್ಯಾಯಮೂರ್ತಿಯಾಗಿ ಭಾರತದ 25ನೆಯ ಸರ್ವೋಚ್ಚ ನ್ಯಾಯಾಲಯದ ಮುಖ್ಯ ನ್ಯಾಯಮೂರ್ತಿಯಾಗಿ ನ್ಯಾಯಮೂರ್ತಿ ವೆಂಕಟಾಚಲಯ್ಯನವರು ಸದಾ ಸತ್ಯ, ಮಾನವೀಯತೆ ಮತ್ತು ಸಾಮಾಜಿಕ ಕಳಕಳಿಯ ಉನ್ನತ ಮೌಲ್ಯಗಳನ್ನು ಎತ್ತಿ ಹಿಡಿದವರು. ನಿವೃತ್ತಿಯ ನಂತರವೂ ಹಲವು ಪ್ರಮುಖ ಜವಾಬ್ದಾರಿಗಳನ್ನು ನಿರ್ವಹಿಸುತ್ತಾ ಬಂದ ಅವರು ಶ್ರೀ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ ದತ್ತಿ ಪ್ರಶಸ್ತಿಯನ್ನು ಪ್ರದಾನ ಮಾಡುತ್ತಿರುವುದು ಹೆಮ್ಮೆಯ ಸಂಗತಿ. ಈ ಮೂಲಕ ನಾಡಿನ ಎರಡು ಸಾಕ್ಷಿ ಪ್ರಜ್ಞೆಗಳನ್ನು ಒಂದೇ ವೇದಿಕೆಯಲ್ಲಿ ತಂದಂತಾಗಿದೆ ಎಂದು **ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ನಾಡೋಜ ಡಾ.ಮಹೇಶ ಜೋಶಿಯವರು ವಿವರಗಳನ್ನು ನೀಡಿದ್ದಾರೆ.**

ಸಾಂಸ್ಕೃತಿಕ ಮಹತ್ವದ ಈ ಕಾರ್ಯಕ್ರಮದ ಕುರಿತು ವಿವರಗಳನ್ನು ಪ್ರಕಟಿಸುವುದರ ಜೊತೆಗೆ ತಮ್ಮ ವರದಿಗಾರರನ್ನೂ ಛಾಯಾಗ್ರಾಹಕರನ್ನು ಕಾರ್ಯಕ್ರಮಕ್ಕೆ ಕಳುಹಿಸಿ ಕೊಡ ಬೇಕಾಗಿ ವಿನಂತಿ

**ಎನ್.ಎಸ್.ಶ್ರೀಧರ ಮೂರ್ತಿ**

**ಸಂಚಾಲಕರು, ಪ್ರಕಟಣಾ ವಿಭಾಗ**

**ಕನ್ನಡ ಸಾಹಿತ್ಯ ಪರಿಷತ್ತು**